# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಬಸವ–ಇಂದಿರಾ ವಸತಿ ಯೋಜನೆ" ಅಡಿಯಲ್ಲಿ ರಾಜ್ಯದಲ್ಲಿನ ಎಲ್ಲಾ ತಾಲ್ಲೂಕುಗಳನ್ನು ಗುಡಿಸಲುರಹಿತ ತಾಲ್ಲೂಕುಗಳನ್ನಾಗಿ ಮಾಡುವ ಬಗ್ಗೆ.

***

**ಪ್ರಸ್ತಾವನೆ:**

ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿನ ಫಲಾನುಭವಿಗಳಿಗಾಗಿ ವಿವಿಧ ವಸತಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಆದರೆ, ಮನೆ ನಿರ್ಮಾಣಕ್ಕಾಗಿ ಬಳಸುವ ಕಟ್ಟಡ ಸಾಮಗ್ರಿಗಳ ಬೆಲೆಯಲ್ಲಿ ಮತ್ತು ಕಾರ್ಮಿಕರ ಕೂಲಿ ದರಗಳಲ್ಲಿ ಗಣನೀಯವಾಗಿ ಹೆಚ್ಚಳವಾಗಿದ್ದರಿಂದ ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಲ್ಲಿ ಗುಡಿಸಲುಗಳಲ್ಲಿ ವಾಸಿಸುತ್ತಿರುವ ಫಲಾನುಭವಿಗಳು ಸರ್ಕಾರವು ನೀಡುತ್ತಿರುವ ಸೀಮಿತ ಸಹಾಯಧನದಲ್ಲಿ ಮನೆಗಳನ್ನು ಕಟ್ಟಿಕೊಳ್ಳಲಾಗದೇ ಗುಡಿಸಲುಗಳಲ್ಲಿಯೇ ವಾಸವನ್ನು ಮುಂದುವರೆಸುತ್ತಾರೆ. ಈ ಹಿನ್ನೆಲೆಯಲ್ಲಿ ಈ ಎಲ್ಲ ಗುಡಿಸಲುವಾಸಿ ಕುಟುಂಬಗಳಿಗೆ ಸರ್ಕಾರದ ವಸತಿ ಸೌಲಭ್ಯವನ್ನು ಲಭ್ಯಗೊಳಿಸುವ ದೃಷ್ಟಿಯಿಂದ "ಬಸವ–ಇಂದಿರಾ ವಸತಿ ಯೋಜನೆ" ಎಂಬ ನೂತನ ನಾಮಾಂಕಿತ ಯೋಜನೆ ಅಡಿಯಲ್ಲಿ ಅವರೆಲ್ಲರಿಗೂ ಮನೆಗಳನ್ನು ಒದಗಿಸಿ, ರಾಜ್ಯದಲ್ಲಿನ ಎಲ್ಲಾ ತಾಲ್ಲೂಕುಗಳನ್ನು ಗುಡಿಸಲುರಹಿತ ತಾಲ್ಲೂಕುಗಳನ್ನಾಗಿ ಮಾಡಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ.

ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ವತಿಯಿಂದ ನಡೆಸುತ್ತಿರುವ ಸಮೀಕ್ಷೆಯಂತೆ ರಾಜ್ಯದಲ್ಲಿ ಒಟ್ಟು 5,00,000 ಗುಡಿಸಲುವಾಸಿ ಕುಟುಂಬಗಳಿರುವುದಾಗಿ ಅಂದಾಜು ಮಾಡಲಾಗಿದೆ. ಈಗ ಜಾರಿಯಲ್ಲಿರುವ ಇಂದಿರಾ ಆವಾಸ್ ಯೋಜನೆಯಡಿ ಒಂದು ಮನೆಯ ನಿರ್ಮಾಣದ 40,000 ರೂ.ಗಳ ಘಟಕ ವೆಚ್ಚದಲ್ಲಿ ಕೇಂದ್ರ ಸರ್ಕಾರದ ಪಾಲು 26,250 ರೂ.ಗಳಾಗಿದ್ದು, ರಾಜ್ಯ ಸರ್ಕಾರದ ಪಾಲು 13,750 ರೂ.ಗಳಾಗಿರುತ್ತದೆ. ಈಗ ಈ ಘಟಕ ವೆಚ್ಚವನ್ನು 40,000 ರೂ.ಗಳಿಂದ 60,000 ರೂ.ಗಳಿಗೆ ಹೆಚ್ಚಿಸಲು ಮಾನ್ಯ ಮುಖ್ಯ ಮಂತ್ರಿಗಳು ಪ್ರಸಕ್ತ ಸಾಲಿನ ಆಯವ್ಯಯದ ಭಾಷಣದಲ್ಲಿ ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಇಂದಿರಾ ಆವಾಸ್ ಯೋಜನೆಯಡಿಯಲ್ಲಿ ನೀಡಲಾಗುವ ಸಹಾಯಧನ, ರಾಜ್ಯ ಸರ್ಕಾರದ ಸಹಾಯಧನ ಮತ್ತು ಫಲಾನುಭವಿಗಳ ವಂತಿಕೆಯೊಂದಿಗೆ ಪ್ರತಿ ವರ್ಷ 1,50,000 ಮನೆಗಳಂತೆ ಗುರಿ ನೀಡಲು ಪ್ರಸ್ತಾಪಿಸಲಾಗಿದೆ.

**ಆದೇಶ ಸಂ. ವಇ 86 ಹೆಚ್‌ಎಎಮ್ 2009, ಬೆಂಗಳೂರು, ದಿನಾಂಕ 13ನೇ ಏಪ್ರಿಲ್ 2010**

1. ರಾಜ್ಯದಲ್ಲಿನ ಎಲ್ಲಾ ಗುಡಿಸಲುವಾಸಿಗಳಿಗೆ 2010–11ನೇ ಸಾಲಿನಿಂದ ಪ್ರತಿ ವರ್ಷ 1.50 ಲಕ್ಷ ಮನೆಗಳಂತೆ ಒಟ್ಟು 5 ಲಕ್ಷ ಮನೆಗಳನ್ನು ಮುಂಬರುವ ವರ್ಷಗಳಲ್ಲಿ "ಬಸವ–ಇಂದಿರಾ ವಸತಿ ಯೋಜನೆ" ಅಡಿಯಲ್ಲಿ ನೀಡುವುದಕ್ಕಾಗಿ ಈ ಕೆಳಗಿನಂತೆ ಕೇಂದ್ರ ಸರ್ಕಾರದ ಸಹಾಯಧನ, ರಾಜ್ಯ ಸರ್ಕಾರದ ಸಹಾಯಧನ ಮತ್ತು ಫಲಾನುಭವಿಯ ವಂತಿಗೆ/ಡಿ.ಆರ್.ಐ.ಸಾಲದೊಂದಿಗೆ 1.00 ಲಕ್ಷ ಮನೆಗಳ ನಿರ್ಮಾಣವನ್ನು ಮತ್ತು ರಾಜ್ಯ ಸರ್ಕಾರದ ಸಂಪೂರ್ಣ ಸಹಾಯಧನ ಮತ್ತು ಫಲಾನುಭವಿಯ ವಂತಿಗೆ/ಡಿ.ಆರ್.ಐ. ಸಾಲದೊಂದಿಗೆ 50,000 ಮನೆಗಳ ನಿರ್ಮಾಣವನ್ನು ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿದೆ:

(ಅ) ಕೇಂದ್ರ ಸರ್ಕಾರದ ಸಹಾಯ ಧನ, ರಾಜ್ಯ ಸರ್ಕಾರದ ಸಹಾಯ ಧನ ಮತ್ತು ಫಲಾನುಭವಿಯ ವಂತಿಗೆ/ಡಿ.ಆರ್.ಐ. ಸಾಲದೊಂದಿಗೆ 1.00 ಲಕ್ಷ ಮನೆಗಳ ನಿರ್ಮಾಣಕ್ಕಾಗಿ ಅವಶ್ಯವಿರುವ ಅನುದಾನ:

(ಕೋಟಿ ರೂ.ಗಳಲ್ಲಿ)

| ಆರ್ಥಿಕ ವರ್ಷ | ನಿಗದಿಪಡಿಸಿದ ಗುರಿ | ಮನೆ ನಿರ್ಮಾಣದ ಘಟಕ ವೆಚ್ಚ (ರೂ.ಗಳಲ್ಲಿ) | ರಾಜ್ಯ ಸರ್ಕಾರದ ಪಾಲಿನ ಅನುದಾನ | ಕೇಂದ್ರ ಸರ್ಕಾರದ ಪಾಲಿನ ಅನುದಾನ | ಡಿ. ಆರ್. ಐ. ಸಾಲದಿಂದ | ಫಲಾನುಭವಿಯ ವಂತಿಗೆ | ಒಟ್ಟು ಬೇಕಾದ ಮೊತ್ತ |
|---|---|---|---|---|---|---|---|
| 2010-11 | 100,000 | 63,000 | 237.50 | 262.50 | 100.00 | 30.00 | 630.00 |

(ಆ) ರಾಜ್ಯ ಸರ್ಕಾರದ ಸಂಪೂರ್ಣ ಸಹಾಯಧನದೊಂದಿಗೆ 50,000 ಮನೆಗಳ ನಿರ್ಮಾಣಕ್ಕಾಗಿ ಅವಶ್ಯವಿರುವ ಅನುದಾನ:

(ಕೋಟಿ ರೂ.ಗಳಲ್ಲಿ)

| ಆರ್ಥಿಕ ವರ್ಷ | ನಿಗದಿ ಪಡಿಸಿದ ಗುರಿ | ಮನೆ ನಿರ್ಮಾಣದ ಘಟಕ ವೆಚ್ಚ (ರೂ.ಗಳಲ್ಲಿ) | ರಾಜ್ಯ ಸರ್ಕಾರದ ಪಾಲಿನ ಅನುದಾನ | ಡಿ. ಆರ್. ಐ. ಸಾಲದಿಂದ | ಫಲಾನುಭವಿಯ ವಂತಿಗೆ | ಒಟ್ಟು ಬೇಕಾದ ಮೊತ್ತ |
|---|---|---|---|---|---|---|
| 2010-11 | 50,000 | 63,000 | 250.00 | 50.00 | 15.00 | 315.00 |

2. ಈ ಯೋಜನೆಗಾಗಿ 487.50 ಕೋಟಿ ರೂ.ಗಳ ರಾಜ್ಯ ಸರ್ಕಾರದ ಅನುದಾನದ ಅವಶ್ಯಕತೆ ಇದ್ದು, ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ನೀಡಿರುವ 422.74 ಕೋಟಿ ರೂ.ಗಳ ಮೊತ್ತದೊಂದಿಗೆ ಈ ಯೋಜನೆಯನ್ನು ಪ್ರಾರಂಭಿಸುವುದು.

3. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಗ್ರಾಮ ಸಭೆಯ ಮುಖಾಂತರ ನಡೆಸತಕ್ಕದ್ದು.

4. ಈ ಕುರಿತು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಕ್ರಿಯಾ ಯೋಜನೆಯನ್ನು ತಯಾರಿಸಿ ಅದರ ಅನುಷ್ಠಾನಕ್ಕಾಗಿ ಹೊರಡಿಸುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ಆರ್. ವಲ್ಲೂರ)
ಪೀಠಾಧಿಕಾರಿ-2, ವಸತಿ ಇಲಾಖೆ.

1. ಮಹಾಲೇಖಪಾಲರು (ಎ ಮತ್ತು ಇ)(ಆಡಿಟ್ 1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಮುಖ್ಯಮಂತ್ರಿಯವರ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
5. ಎಲ್ಲಾ ಪ್ರಾಂತೀಯ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಗುಲ್ಬರ್ಗಾ.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
8. ವಸತಿ, ವಾರ್ತಾ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರ ಆಪ್ತ ಕಾರ್ಯದರ್ಶಿ
9. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ 3 ಮತ್ತು 9), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.